(518)

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ರಾಯಚೂರು ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪ–1) ಸರ್ಕಾರದ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ನಅಇ:132:ಗುಅಪ್ರಾ:2009 ದಿನಾಂಕ 25.09.2009,
2) ಆಯುಕ್ತರು, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರ ಪತ್ರ ಸಂಖ್ಯೆ: ನಪ್ರಾರಾ: ಮ.ಯೋ(ಪ–1):ಅಂತಿಮ:2012–13/1018–1019 ದಿನಾಂಕ 31.03.2011 ಮತ್ತು 20.11.2012,
3) ನ.ಗ್ರಾ.ಯೋ ನಿರ್ದೇಶಕರ ಏಕ ಕಡತ ಸಂಖ್ಯೆ: ನಗ್ರಾಯೋ:ಉನಿ(ವಿ.ವಿ): ರಾಯಚೂರು:ಮ.ಯೋ:ಅಂತಿಮ:2012–13 ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ 26.09.2011 ಮತ್ತು ದಿ: 23.04.2014,
4) ನ.ಗ್ರಾ.ಯೋ ನಿರ್ದೇಶಕರ ಪತ್ರ ಸಂಖ್ಯೆ: ನ.ಗ್ರಾ.ಯೋ(3)ಜಂ:ನಿ:ರಾಯಚೂರು ಮಯೋ:ಅಂತಿಮ 2012–2013 ದಿನಾಂಕ 15.06.2013.

* * * *

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ರಾಯಚೂರು ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ (ಪ–1) ಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2) ದಿನಾಂಕ 20.11.2012ರ ಪತ್ರದಲ್ಲಿ ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರವು, ರಾಯಚೂರು ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆ (ಪ–1) ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾ ಯೋಜನೆ (ಪ–1)ಯ ನಕ್ಷೆಗಳನ್ನು ಮತ್ತು ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿದೆ.

ಮೇಲೆ ಓದಲಾದ (3) ಮತ್ತು (4)ರಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಏಕ ಕಡತದಲ್ಲಿ ರಾಯಚೂರು ನಗರದ ಜನಸಂಖ್ಯೆಯು 2021ರಲ್ಲಿ 5,00,000 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ರಾಯಚೂರು ನಗರದ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 7165.00 ಹೆಕ್ಟೇರ್ ಪ್ರದೇಶವನ್ನು ನಗರದ ಅಭಿವೃದ್ಧಿಗಾಗಿ ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾಯೋಜನೆ (ಪ–1) ಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ (12)ರಲ್ಲಿ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ ನಗರದ ಮುಂದಿನ ಯೋಜಿತ ಬೆಳವಣಿಗೆಗೆ ಪ್ರಸ್ತಾಪಿಸಿರುವ 7165.00 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 3442.00 ಹೆಕ್ಟೇರ್ (ಶೇ.48.34), ವಾಣಿಜ್ಯಕ್ಕಾಗಿ 254.00 ಹೆಕ್ಟೇರ್ (ಶೇ. 3.57), ಕೈಗಾರಿಕೆಗಾಗಿ 884.00 ಹೆಕ್ಟೇರ್ (ಶೇ.12.42), ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕೆ 362.00 ಹೆಕ್ಟೇರ್ (ಶೇ. 5.08) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 728.00 ಹೆಕ್ಟೇರ್ (ಶೇ. 10.22) ಹಾಗೂ ಸಾರಿಗೆ/ಸಂಪರ್ಕ ವಲಯಕ್ಕೆ 1378.00 ಹೆಕ್ಟೇರ್ (ಶೇ.19.36) ನಾಗರೀಕ ಸೌಲಭ್ಯಕ್ಕಾಗಿ 72.00 ಹೆಕ್ಟೇರ್ (ಶೇ. 1.01) ಪ್ರದೇಶವನ್ನು ನಿಗದಿಪಡಿಸಲಾಗಿದೆ. ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆ (ಪ–1) ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13 (3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

......2

DTCP-860

528 2/3/15

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 165 ಗುಅಪ್ರಾ 2011 ದಿನಾಂಕ 27.02.2015**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಯಚೂರು ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ (ಪ-1)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 12 ರಲ್ಲಿ ನಿಗದಿಪಡಿಸಿರುವ ಅಂಶಗಳನ್ವಯ ನಗರದ ಮುಂದಿನ ಯೋಜಿತ ಬೆಳವಣಿಗೆಗೆ ಪ್ರಸ್ತಾಪಿಸಿರುವ 7165.00 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 3442.00 ಹೆಕ್ಟೇರ್ (ಶೇ.48.34), ವಾಣಿಜ್ಯಕ್ಕಾಗಿ 254.00 ಹೆಕ್ಟೇರ್ (ಶೇ. 3.57), ಕೈಗಾರಿಕೆಗಾಗಿ 884.00 ಹೆಕ್ಟೇರ್ (ಶೇ.12.42), ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕೆ 362.00 ಹೆಕ್ಟೇರ್ (ಶೇ. 5.08) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 728.00 ಹೆಕ್ಟೇರ್ (ಶೇ.10.22) ಮತ್ತು ಸಾರಿಗೆ/ಸಂಪರ್ಕ ವಲಯಕ್ಕೆ 1378.00 ಹೆಕ್ಟೇರ್ (ಶೇ.19.36) ನಾಗರೀಕ ಸೌಲಭ್ಯಕ್ಕಾಗಿ 72.00 ಹೆಕ್ಟೇರ್ (ಶೇ. 1.01) ಪ್ರದೇಶವನ್ನು ನಿಗದಿಪಡಿಸಿ, ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಪ್ರಕರಣ 13(3)ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾ ಯೋಜನೆ (ಪ-1)ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಮತ್ತು ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

**ಷರತ್ತು:**

1) ಈ ಆದೇಶದ ದಿನಾಂಕದಿಂದ 2 ವರ್ಷಗಳವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಕೂಡದು.
2) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 69(1) ರ ಪ್ರಕಾರ 5 ವರ್ಷಗಳ ಒಳಗೆ ಉದ್ಯಾನವನ, ಬಯಲು ಜಾಗ, ಆಟದ ಮೈದಾನ ಮತ್ತು ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕೆ ಮೀಸಲಿಟ್ಟ ಜಮೀನುಗಳನ್ನು ನಿಯಮಾನುಸಾರ ಭೂ ಸ್ವಾಧೀನ ಪಡಿಸಿಕೊಳ್ಳಲು ಕ್ರಮ ಜರುಗಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

27/2/15

(ವಿ. ರಾಜೇಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

27/02/15

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಸದರಿ ಅಧಿಸೂಚನೆಯನ್ನು ರಾಜ್ಯ ಪತ್ರದಲ್ಲಿ ಪ್ರಕಟಿಸಿ ಅದರ ಪ್ರಕಟಿತ ಅಧಿಸೂಚನೆಯ 150 ಪ್ರತಿಗಳನ್ನು ಸರ್ಕಾರಕ್ಕೆ ಕಳುಹಿಸುವಂತೆ ಕೋರಲಾಗಿದೆ.

**ಪ್ರತಿಗಳು:**

1) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
2) ಆಯುಕ್ತರು, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರ, ರಾಯಚೂರು
3) ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ರಾಯಚೂರು
4) ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
5) ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ರವರ ಆಪ್ತ ಕಾರ್ಯದರ್ಶಿಗಳು.
6) ಸರ್ಕಾರದ ಉಪಕಾರ್ಯದರ್ಶಿಗಳು-2, ನಗರಾಭಿವೃದ್ಧಿ ಇಲಾಖೆ, ರವರ ಆಪ್ತ ಕಾರ್ಯದರ್ಶಿಗಳು.
7) ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.